# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 800 |
| ಸದಸ್ಯರ ಹೆಸರು | : | ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 23.07.2024 |
| ಉತ್ತರಿಸುವ ಸಚಿವರು | : | ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಹೊಸದಾಗಿ ಸ್ಥಾಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; | ರಾಜ್ಯ ಸರ್ಕಾರವು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಇಚ್ಛಿಸುವ ಉದ್ಯಮಶೀಲರಿಗೆ ಬೆಂಬಲ ನೀಡಲು ಅನೇಕ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸುತ್ತಿದೆ. ಇವುಗಳಡಿಯಲ್ಲಿ ಸಾಲ, ಸಹಾಯಧನ ಇತ್ಯಾದಿ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ನೀಡಲಾಗುತ್ತಿದೆ.<br><br>ರಾಜ್ಯದಲ್ಲಿ ಸಣ್ಣ ಕೈಗಾರಿಕೆ ಪ್ರಾರಂಭಿಸಲು ಇರುವ ಯೋಜನೆಗಳು ಈ ಕೆಳಗಿನಂತಿವೆ.<br><br>1. ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ಪಾದನಾ ಘಟಕಗಳಿಗೆ ಗರಿಷ್ಠ ಸಾಲ ರೂ.50 ಲಕ್ಷಗಳವರೆಗೆ ಸೇವಾ ಘಟಕಗಳಿಗೆ ರೂ.20 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ.15 ರಿಂದ ಶೇ.35 ರವರೆಗೆ ಗರಿಷ್ಠ ರೂ.7.50 ಲಕ್ಷದಿಂದ ರೂ.17.50 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ.<br><br>2. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ, ಮತ್ತು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ರೂ.5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರುಪಾವತಿ ಮಾಡಿದ ಅತಿ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇಕಡ 6 ರಂತೆ ಬಡ್ಡಿ ಸಹಾಯಧನ ನೀಡಲಾಗುವುದು.<br><br>3. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಶೇ.75 ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು ಮತ್ತು ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ. ನಿವೇಶನದ ಗರಿಷ್ಠ ವಿಸ್ತೀರ್ಣ 2 ಎಕರೆಗಳು.<br><br>4. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕಿನಿಂದ ಸಾಲ ಒದಗಿಸಿ ಯೋಜನಾ ವೆಚ್ಚದ ಮೇಲೆ ಶೇ.60 ರಷ್ಟು ಗರಿಷ್ಠ ರೂ.5.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.<br><br>5. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮೊದಲ ಪೀಳಿಗೆಯ |

| | | |
|---|---|---|
| | | ಉದ್ಯಮಿದಾರರು ಬ್ಯಾಂಕ್/ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಸ್ಥಾಪಿಸುವ ಹೊಸ ಘಟಕಗಳಿಗೆ ಗರಿಷ್ಟ ರೂ.10.00 ಕೋಟಿ ಯೋಜನಾ ವೆಚ್ಚದಲ್ಲಿ The Debt Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ) ಘಟಕಕ್ಕೆ ಪ್ರವರ್ತಕ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ.50 ರಷ್ಟು ಬಡ್ಡಿ ರಹಿತ ಗರಿಷ್ಟ ರೂ.75 ಲಕ್ಷ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ.<br><br>6. ಕರ್ನಾಟಕ ರಾಜ್ಯ ಕೈಗಾರಿಕಾ ನೀತಿ 2020-25 ರಂತೆ ಕೆಳಕಾಣಿಸಿದ ಪ್ರೋತ್ಸಾಹ ಮತ್ತು ರಿಯಾಯಿತಿ ಸೌಲಭ್ಯಗಳನ್ನು ಅರ್ಹ ಕೈಗಾರಿಕೆಗಳಿಗೆ ನೀಡಿ ಉತ್ತೇಜಿಸಲಾಗುತ್ತಿದೆ:<br><br>1. ಮುದ್ರಾಂಕ ಶುಲ್ಕ ವಿನಾಯಿತಿ<br>2. ನೋಂದಣಿ ಶುಲ್ಕ ರಿಯಾಯಿತಿ.<br>3. ಬಂಡವಾಳ ಹೂಡಿಕೆ ಸಹಾಯಧನ<br>4. ಕಿರು ಮತ್ತು ಸಣ್ಣ ಕೈಗಾರಿಕೆಗಳಿಗೆ ವಿದ್ಯುತ್ ಸಹಾಯಧನ<br>5. ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>6. ರಫ್ತು ಆಧಾರಿತ ಘಟಕಗಳಿಗೆ ರಿಯಾಯಿತಿ.<br>7. ತ್ಯಾಜ್ಯ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಸಹಾಯಧನ.<br>8. ವಿದ್ಯುತ್ ತೆರಿಗೆ ವಿನಾಯಿತಿ<br>9. ತಾಂತ್ರಿಕ ಉನ್ನತೀಕರಣ, ಗುಣಮಟ್ಟ ಪ್ರಮಾಣಪತ್ರ ಸಹಾಯಧನ<br>10. ಮಳೆ ನೀರು ಕೊಯ್ಲು / ಸಂರಕ್ಷಣೆ ಸಹಾಯಧನ<br>11. ತಂತ್ರಜ್ಞಾನ ಉನ್ನತೀಕರಣಕ್ಕೆ ಬಡ್ಡಿ ಸಹಾಯಧನ |
| ಆ) | ಕಳೆದ 4 ವರ್ಷಗಳಿಂದ ಇಲ್ಲಿಯವರೆಗೂ ಎಷ್ಟು ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲಾಗಿದೆ; (ಸಂಪೂರ್ಣವಾದ ಮಾಹಿತಿ ನೀಡುವುದು) | ಕಳೆದ 4 ವರ್ಷಗಳಲ್ಲಿ (2020-21, 2021-22, 2022-23 ಮತ್ತು 2023-24 ನೇ ಸಾಲಿನಲ್ಲಿ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ನೆರವಿನಿಂದ ಸ್ಥಾಪನೆಗೊಂಡ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ವಿವರಗಳನ್ನು **ಅನುಬಂಧ-1 ರಲ್ಲಿ** ಒದಗಿಸಲಾಗಿದೆ. |
| ಇ) | ಜಿಲ್ಲೆಯಲ್ಲಿ ಪ್ರಸ್ತುತ ಇರುವ ಸಣ್ಣ ಕೈಗಾರಿಕೆ ಕೇಂದ್ರವೆಷ್ಟು, ಅವುಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣವಾದ ಮಾಹಿತಿ ನೀಡುವುದು) | ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮವು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಅಭಿವೃದ್ಧಿಪಡಿಸಿರುವ ಕೈಗಾರಿಕಾ ವಸಹಾತುಗಳ ಸಂಖ್ಯೆ 11. ಅವುಗಳ ವಿವರಗಳನ್ನು **ಅನುಬಂಧ-2**ರಲ್ಲಿ ಒದಗಿಸಲಾಗಿದೆ.<br><br>ಇವುಗಳ ಪೈಕಿ 5 ಕೈಗಾರಿಕಾ ವಸಹಾತುಗಳಿಗೆ ಪುನಃ ರಸ್ತೆ, ಚರಂಡಿ, ವಿದ್ಯುತ್ ದೀಪ ದುರಸ್ತಿ ಕಾರ್ಯಗಳನ್ನು 2015-16, 2016-17, 2017-18 ಮತ್ತು 2018-19ನೇ ಸಾಲಿನಲ್ಲಿ Critical Infrastructure Development ಯೋಜನೆಯಡಿಯಲ್ಲಿ ಮಾಡಲಾಗಿದೆ. ಅವುಗಳ ವಿವರಗಳನ್ನು **ಅನುಬಂಧ-2 ರಲ್ಲಿ** ಒದಗಿಸಲಾಗಿದೆ. |

ಸಿಐ 172 ಸಿಎಸ್‌ಸಿ 2024

**(ಶರಣಬಸಪ್ಪ ದರ್ಶನಾಪೂರ)**
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು.

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ಎಲ್.ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ರವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ 800ಕ್ಕೆ**

**ಅನುಬಂಧ-1**

**ಕಳೆದ 4 ವರ್ಷಗಳಲ್ಲಿ (2020-21, 2021-22, 2022-23 ಮತ್ತು 2023-24 ನೇ ಸಾಲಿನಲ್ಲಿ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ನೆರವಿನಿಂದ ಸ್ಥಾಪನೆಗೊಂಡ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ವಿವರಗಳು**

| ಕ್ರ. ಸಂ | TALUK | 2020-21 | 2021-22 | 2022-23 | 2023-24 |
|---|---|---|---|---|---|
| | **KOLAR DISTRICT** | | | | |
| 1 | ಕೈಗಾರಿಕಾ ನೀತಿ - ಪ್ರೋತ್ಸಾಹ ಮತ್ತು ರಿಯಾಯಿತಿಗಳು | 26 | 4 | 68 | 39 |
| 2 | ಪ್ರಧಾನಮಂತ್ರಿ ಉದ್ಯೋಗ ಸೃಜನೆ ಯೋಜನೆ | 79 | 55 | 95 | 68 |
| 3 | ವಿಶೇಷ ಘಟಕ ಯೋಜನೆ- 60:40 ಸಹಾಯಧನ | | | | |
| 4 | ವಿಶೇಷ ಘಟಕ ಯೋಜನೆ-ಸಾಫ್ಟ್ ಸೀಡ್ ಕ್ಯಾಪಿಟಲ್ | 2 | 2 | 9 | - |
| 5 | ಗಿರಿಜನ ಉಪ ಯೋಜನೆ - 60:40 ಸಹಾಯಧನ | | | | |
| 6 | ಗಿರಿಜನ ಉಪ ಯೋಜನೆ- ಸಾಫ್ಟ್ ಸೀಡ್ ಕ್ಯಾಫಿಟಲ್ | 1 | 1 | - | - |
| | **ಒಟ್ಟು** | **108** | **62** | **172** | **107** |
| | **CHIKKABALLAPUR DISTRICT** | | | | |
| 1 | ಕೈಗಾರಿಕಾ ನೀತಿ - ಪ್ರೋತ್ಸಾಹ ಮತ್ತು ರಿಯಾಯಿತಿಗಳು | 13 | 3 | 18 | 13 |
| 2 | ಪ್ರಧಾನಮಂತ್ರಿ ಉದ್ಯೋಗ ಸೃಜನೆ ಯೋಜನೆ | 108 | 91 | 78 | 68 |
| 3 | ವಿಶೇಷ ಘಟಕ ಯೋಜನೆ- 60:40 ಸಹಾಯಧನ | 2 | 6 | 2 | - |
| 4 | ವಿಶೇಷ ಘಟಕ ಯೋಜನೆ - ಸಾಫ್ಟ್ ಸೀಡ್ ಕ್ಯಾಫಿಟಲ್ | - | - | 1 | - |
| 5 | ಗಿರಿಜನ ಉಪ ಯೋಜನೆ-60:40 ಸಹಾಯಧನ | 1 | 2 | 1 | - |
| 6 | ಗಿರಿಜನ ಉಪ ಯೋಜನೆ - ಸಾಫ್ಟ್ ಸೀಡ್ ಕ್ಯಾಫಿಟಲ್ | - | - | 1 | - |
| | **ಒಟ್ಟು** | **124** | **102** | **101** | **81** |

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ಎಲ್.ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ರವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ 800ಕ್ಕೆ ಅನುಬಂಧ-2**

**ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮವು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಅಭಿವೃದ್ಧಿಪಡಿಸಿರುವ ಕೈಗಾರಿಕಾ ವಸಹಾತುಗಳು ಮತ್ತು ಅಭಿವೃದ್ಧಿಪಡಿಸಲಾದ ಮೂಲ ಸೌಕರ್ಯ**

| Sl. No. | District | Taluks | Industrial Estate | Year | land (in acres) | developed |
|---|---|---|---|---|---|---|
| 1 | CHIKKABALLAPUR | CHIKKABALLAPUR | Mudenahalli | 1978 | 7.31 | 19 |
| 2 | CHIKKABALLAPUR | CHITHAMANI | Chitamani | 1985 | 19.11 | 26 |
| 3 | CHIKKABALLAPUR | GOWRIBIDANUR | Gowribidanur | 1987 | 5.19 | 34 |
| 4 | CHIKKABALLAPUR | GOWRIBIDANUR | Kudumalakunte | 2012 | 48.13 | 168 |
| 5 | CHIKKABALLAPUR | SIDLAGATTA | Shidlagatta | 1985 | 17.20 | 10 |
| 6 | KOLAR | BAGARPET | K.G.F | 1962 | 14.37 | 53 |
| 7 | KOLAR | KOLAR | Kyalanur | 1994 | 5.00 | 13 |
| 8 | KOLAR | KOLAR | Tamaka | 1983 | 25.33 | 53 |
| 9 | KOLAR | KOLAR | Mysore Lamps | NA | - | 60 |
| 10 | KOLAR | MALUR | Malur | 1986 | 6.34 | 33 |
| 11 | KOLAR | MULBAGALU | Mulbagalu | 1989 | 5.00 | 22 |

**ಕೈಗಾರಿಕಾ ವಸಹಾತುಗಳು ಮತ್ತು ಅಭಿವೃದ್ಧಿಪಡಿಸಲಾದ ಮೂಲ ಸೌಕರ್ಯ**

| Sl. No. | District | Taluks | Ind. Estate | Infrastructure developed |
|---|---|---|---|---|
| 1 | CHIKKABALLAPUR | CHITHAMANI | Chitamani | 2016-17 |
| 2 | CHIKKABALLAPUR | SIDLAGATTA | Shidlagatta | 2018-19 |
| 3 | KOLAR | KOLAR | Kyalanur | 2015-16 |
| 4 | KOLAR | KOLAR | Tamaka | 2015-16 |
| 5 | KOLAR | MULBAGALU | Mulbagalu | 2015-16 |